ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 19–09–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ರಾಷ್ಟ್ರಪತಿಯವರ ಪದಕ ಪ್ರದಾನ ಸಮಾರಂಭ:<br>ಪದಕ ಪ್ರದಾನ:<br>ಮಾನ್ಯ ವಜುಭಾಯಿ ವಾಲ,<br>ರಾಜ್ಯಪಾಲರು,<br>ಕರ್ನಾಟಕ<br>ಅಧ್ಯಕ್ಷತೆ:<br>ಕೆ. ಜೆ. ಜಾರ್ಜ್,<br>ಗೃಹ ಸಚಿವರು | 21–09–2015<br>ಸೋಮವಾರ<br>ಬೆಳಿಗ್ಗೆ<br>11–00 ಗಂಟೆಗೆ | ರಾಜಭವನ,<br>ಬೆಂಗಳೂರು |
| 2. | Press Preview:<br>A new film titled “Little Dolphin” launch at Digital 3D Theatre. | 21–09–2015<br>Monday<br>at<br>11-30 AM | Ist Floor,<br>Visvesvaraya Industrial & Technological Museum,<br>(VITM), Bangalore |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

# ವಿವಿಧ ಹುದ್ದೆಗಳಿಗೆ ಸಂದರ್ಶನ

ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ಹಾಗೂ ಶಾಲೆಗಳಲ್ಲಿನ ಪ್ರಾಂಶುಪಾಲರು ಹಾಗೂ ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿನ ವಾರ್ತಾ ಸಹಾಯಕರ ಹುದ್ದೆಗಳಿಗೆ ಸೆಪ್ಟೆಂಬರ್ 23 ಮತ್ತು 25 ರಂದು ಸಂದರ್ಶನವನ್ನು ಆಯೋಗದ ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು – 560 001 ನಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಸಂದರ್ಶನಕ್ಕೆ ಸರ್ಕಾರದ ಅಭ್ಯರ್ಥಿಗಳ ಪಟ್ಟಿ ಸಂದರ್ಶನದ ವೇಳೆ, ದಿನಾಂಕ ಇತ್ಯಾದಿ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.in" ನ್ನು ನೋಡಬಹುದು. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಪತ್ರ ಸ್ವೀಕೃತವಾಗದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಕೇಂದ್ರ ಕಚೇರಿಯನ್ನು ಸಂದರ್ಶನಕ್ಕೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಬಹುದು.

ಪಲ್ಲವಿ:ಬಾಬು:ಜಿಪಿಆರ್.

# ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗಕ್ಕೆ ಧನಸಹಾಯ

ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)

2015–16 ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗಕ್ಕೆ ಧನಸಹಾಯ ನೀಡುವ ಸಲುವಾಗಿ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನದಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಶಿಕ್ಷಕರು (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ವ್ಯಾಪ್ತಿಯ) ಆಯಾ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ನಿಧಿಗಳ ಕಚೇರಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಈ ಮೂಲಕ ತಿಳಿಸಿದೆ. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 31–10–2015.

ಪದವಿ ಪೂರ್ವ ಕಾಲೇಜುಗಳು ಹಾಗೂ ಮೇಲ್ಪಟ್ಟ ವಿದ್ಯಾಸಂಸ್ಥೆಗಳ ಉಪನ್ಯಾಸಕರುಗಳು ಮತ್ತು ಪ್ರಾಚಾರ್ಯರು ಅವರ ಮೇಲಾಧಿಕಾರಿಗಳ ಮುಖಾಂತರ ದಿನಾಂಕ : 31–10–2015 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು. ಅರ್ಜಿ/ನಮೂನೆಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ್ಜಾಲದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ನಿಗದಿಪಡಿಸಿರುವ ಅಂತಿಮ ದಿನಾಂಕದ ನಂತರ ಬರುವ ಅರ್ಜಿಗಳನ್ನು ಹಾಗೂ ಅಪೂರ್ಣ ಮಾಹಿತಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಪಲ್ಲವಿ:ಬಾಬು:ಜಿಪಿಆರ್.

# ಡಿ.ಇಡಿ ಫಲಿತಾಂಶ

ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಜೂನ್ – 2015 ಮಾಹೆಯಲ್ಲಿ ನಡೆಸಿದ ಪ್ರಥಮ, ದ್ವಿತೀಯ ಡಿ.ಇಡಿ ಮತ್ತು ಪಿಪಿಟಿ ಮುಖ್ಯ ಪರೀಕ್ಷೆಗಳ ಫಲಿತಾಂಶ ಪಟ್ಟಿಯನ್ನು ರಾಜ್ಯದ ಎಲ್ಲಾ ಡಯಟ್‌ಗಳಿಗೆ ಕಳುಹಿಸಲಾಗಿದೆ. ಸಂಬಂಧಿಸಿದ ಡಿ.ಇಡಿ ಸಂಸ್ಥೆಗಳ ಪ್ರಾಂಶುಪಾಲರುಗಳು ಫಲಿತಾಂಶ ಪಟ್ಟಿಯನ್ನು ಆಯಾ ಜಿಲ್ಲಾ ಡಯಟ್‌ಗಳಿಂದ ಪಡೆದು ದಿನಾಂಕ: 21–09–2015 ರಂದು ಮಧ್ಯಾಹ್ನ 4–00 ಗಂಟೆಗೆ ಫಲಿತಾಂಶವನ್ನು ಆಯಾ ಸಂಸ್ಥೆಗಳಲ್ಲಿ ಪ್ರಕಟಿಸಲು ನಿರ್ದೇಶಕರು (ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರು ತಿಳಿಸಿದ್ದಾರೆ.

ಪಲ್ಲವಿ ಬಾಬು:ಜಿಪಿಆರ್.

# D.ED RESULTS

**Bengaluru, September 19 (Karnataka Information)**

**Results of I & II D.Ed Main Examination conducted by Karnataka Secondary Education Examination Board, Bangalore during June -2015 have been sent to all the DIETs in the State. Concerned principals of D.Ed institutions are informed to collect the results from concerned DIETs and to announce the results on 21-09-2015 at 4.00 pm in the respectrive institutions as per the statement of Director (Other Exams) K.S.E.E.B Bengaluru.**

pallavi:babu:gpr.

# ಸೇನಾನಿಗಳಿಗೆ ಸನ್ಮಾನ

**ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)**

1965 ರಲ್ಲಿ ಪಾಕಿಸ್ಥಾನ ವಿರುದ್ಧದ ಸಮರದಲ್ಲಿ ಭಾರತ ದೇಶದ ಪರವಾಗಿ ಹೋರಾಡಿ ಭಾರತಕ್ಕೆ ವಿಜಯೋತ್ಸವ ಮೂಡಿಸಿದ ವೀರ ಸೇನಾನಿಗಳಿಗೆ ಮತ್ತು ಸಮರದಲ್ಲಿ ಮೃತಪಟ್ಟ ಸೇನಾನಿಗಳ ವಿಧವೆಯರಿಗೆ ಅವರ ದೇಶತ್ಯಾಗವನ್ನು ಸ್ಮರಿಸಿ ಗೌರವಿಸುವ, ಸನ್ಮಾನಿಸುವ ಕಾರ್ಯಕ್ರಮವನ್ನು ಬೆಂಗಳೂರಿನ ಹೊಸೂರು ರಸ್ತೆಯ ಸಿಎಂಪಿ ಕೇಂದ್ರ ಮತ್ತು ಶಾಲೆಯಲ್ಲಿ ಸೆಪ್ಟೆಂಬರ್ 24 ರಂದು ಬೆಳಿಗ್ಗೆ 11–30 ಗಂಟೆಗೆ ಏರ್ಪಡಿಸಲಾಗಿದೆ ಎಂದು ಕಮಾಂಡೆಂಟ್ ಕರ್ನಲ್ ಎಸ್.ಬಿ. ಕೊಣ್ಣೂರ್ ಅವರು ತಿಳಿಸಿದ್ದಾರೆ.

ಪಲ್ಲವಿ:ಬಾಬು:ಜಿಪಿಆರ್.

## ಅಂಚೆ ಅದಾಲತ್

ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)

ಬೆಂಗಳೂರು ಜಯನಗರದ ಕೇಂದ್ರ ಅಂಚೆ ಕಚೇರಿಯ ನೆಲಮಹಡಿಯಲ್ಲಿ ಅಂಚೆ ಸೇವೆಗಳಿಗೆ ಸಂಬಂಧಿಸಿದಂತೆ ಸೆಪ್ಟೆಂಬರ್ 30 ರಂದು ಬೆಳಿಗ್ಗೆ 11–30 ಗಂಟೆಗೆ ಅಂಚೆ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ ಎಂದು ಬೆಂಗಳೂರು ದಕ್ಷಿಣ ವಿಭಾಗದ ಸೀನಿಯರ್ ಅಂಚೆ ಸೂಪರಿಂಟೆಂಡೆಂಟ್ ಅವರು ತಿಳಿಸಿದ್ದಾರೆ.

ಪಲ್ಲವಿ: ಬಾಬು:ಜಿಪಿಆರ್.

## "ಲಿಟಲ್ ಡಾಲ್‌ಫಿನ್" ಚಿತ್ರ ಪ್ರದರ್ಶನ

ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)

ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ಸಂಗ್ರಹಾಲಯದಲ್ಲಿ ಸೆಪ್ಟೆಂಬರ್ 21 ರಂದು ಮಧ್ಯಾಹ್ನ 3–00 ಗಂಟೆಗೆ "ಲಿಟಲ್ ಡಾಲ್‌ಫಿನ್" ಚಿತ್ರ ಪ್ರದರ್ಶನವನ್ನು ಹಮ್ಮಿಕೊಂಡಿದೆ.

ಈ ಚಿತ್ರ ಪ್ರದರ್ಶನವನ್ನು ವೀಕ್ಷಿಸಲು ಸಾರ್ವಜನಿಕರಿಗೆ ರೂ. 25/– ಶುಲ್ಕ ಆಗಿದ್ದು, ವಿದ್ಯಾರ್ಥಿ/ವಿದ್ಯಾರ್ಥಿನಿಗಳಿಗೆ ತಲಾ ರೂ. 20/– ಶುಲ್ಕ ಹಾಗೂ ಸರ್ಕಾರಿ ಹಾಗೂ ಮುನ್ಸಿಪಾಲ್ ಶಾಲೆಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ತಲಾ ರೂ 10/– ಶುಲ್ಕ ಆಗಿರುತ್ತದೆ. ಈ ಚಿತ್ರದ ಅವಧಿಯು 9 ನಿಮಿಷ ಹಾಗೂ 16 ಸೆಕೆಂಡ್ ಆಗಿರುತ್ತದೆ.

ಪಲ್ಲವಿ:ಬಾಬು:ಜಿಪಿಆರ್.

## ಪಶುಭಾಗ್ಯ ಯೋಜನೆಯಡಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)

ಭೂರಹಿತ ಕೃಷಿ ಕಾರ್ಮಿಕರಿಗಾಗಿ ಪಶುಪಾಲನಾ ಸೇವಾ ಇಲಾಖೆ, ಪಶುಭಾಗ್ಯ ಯೋಜನೆಯಡಿಯಲ್ಲಿ ಬೆಂಗಳೂರು ನಗರ ಜಿಲ್ಲೆಯ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಿದೆ.

ಈ ಯೋಜನೆಯಡಿ ಜಿಲ್ಲೆಗೆ 150 ಫಲಾನುಭವಿಗಳಿಗೆ ಹಸು/ಎಮ್ಮೆ ಘಟಕ 119 ಫಲಾನುಭವಿಗಳಿಗೆ ಕುರಿ /ಆಡು ಘಟಕ, 32 ಹಂದಿ ಸಾಕಾಣಿಕೆ ಹಾಗೂ 20 ಮೊಟ್ಟೆ ಕೋಳಿ ಸಾಕಾಣಿಕೆ ಘಟಕಗಳಿಗೆ ಅನುದಾನ ಮಂಜೂರಾಗಿದೆ. ಬ್ಯಾಂಕ್ ಸಾಲ ಸೌಲಭ್ಯದ ಸಹಯೋಗದೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪಂಗಡದವರಿಗೆ ಶೇಕಡಾ 50 ಹಾಗೂ ಸಾಮಾನ್ಯ ವರ್ಗದವರಿಗೆ ಶೇಕಡಾ 25 ರಷ್ಟು ಸಹಾಯಧನ ನೀಡಲಾಗುತ್ತದೆ. ಅರ್ಹ ಭೂರಹಿತ ಕೃಷಿ ಕಾರ್ಮಿಕರು ನಿಗದಿತ ಅರ್ಜಿ ನಮೂನೆಗಳನ್ನು ತಾಲ್ಲೂಕು ಸಹಾಯಕ ನಿರ್ದೇಶಕರ ಕಛೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ – 5 ರೊಳಗೆ ಅರ್ಜಿ ಸಲ್ಲಿಸುವಂತೆ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

ಪಲ್ಲವಿಬಾಬು/ಕೆಎಂ

# <u>ಸಾರಿಗೆ ಅದಾಲತ್</u>

ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ)

ಬೆಂಗಳೂರು ರಾಜಾಜಿನಗರದಲ್ಲಿರುವ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಸೆಪ್ಟೆಂಬರ್ 21 ರಂದು ಸಂಜೆ 4–00 ಗಂಟೆಗೆ ಸಾರಿಗೆ ಅದಾಲತ್ ಕಾರ್ಯಕ್ರಮವನ್ನು ಏರ್ಪಡಿಸಿದೆ.

ಈ ಕಚೇರಿಗೆ ಸಂಬಂಧಿಸಿದ ಕುಂದುಕೊರತೆಗಳು ಇದ್ದಲ್ಲಿ ಅಂದು ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಮಂಡಿಸಿ ಪರಿಹಾರಪಡೆದುಕೊಳ್ಳಲು ಉಪ ಸಾರಿಗೆ ಆಯುಕ್ತರು ಕೋರಿದ್ದಾರೆ.

ಪಲ್ಲವಿ:ಬಾಬು:ಜಿಪಿಆರ್.